**Akashvani : Bangalore**
**Regional Bulletin In Kannada**
**13.04.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**13.04.2026 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಮಹಿಳೆಯರಿಗೆ ಮೀಸಲಾತಿ ಅತ್ಯವಶ್ಯಕ ; ನಾರಿ ಶಕ್ತಿ ವಂದನ್ ಸಮ್ಮೇಳನದಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದನೆ**

**೨. ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಹಿನ್ನೀರಿನ ಸೇತುವೆ; ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆ**

**೩. ಕೇಂದ್ರ ಸರ್ಕಾರಿ ಸ್ವಾಮ್ಯದ ಬಿಇಎಂಎಲ್ ನಿಂದ ದೇಶೀಯ ನಿರ್ಮಿತ ಇಂಧನ ದಕ್ಷತೆಯ ಎಲೆಕ್ಟ್ರಿಕ್ ಡಂಪ್ ಟ್ರಕ್ ಬಿಡುಗಡೆ**

**೪. ನಾಳೆ ಸಂವಿಧಾನ ಶಿಲ್ಪಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಜಯಂತಿ; ರಾಜ್ಯಾದ್ಯಂತ ವಿವಿಧ ವಿಧಾಯಕ ಕಾರ್ಯಕ್ರಮ ಆಯೋಜನೆ**

**<><*<><>*><>**

ಪ್ರಜಾತಂತ್ರ ವ್ಯವಸ್ಥೆಯಲ್ಲಿ ಮಹಿಳೆಯರಿಗೆ ಮೀಸಲಾತಿ ಒದಗಿಸುವ ಅವಶ್ಯತೆಯಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು ನವದೆಹಲಿಯಲ್ಲಿಂದು 'ನಾರಿ ಶಕ್ತಿ ವಂದನ್' ಸಮ್ಮೇಳನ ಉದ್ದೇಶಿಸಿ ಮಾತನಾಡಿ, ಮಹಿಳೆಯರ ಪಾಲುದಾರಿಕೆ ದೇಶವನ್ನು ಬಲಪಡಿಸುತ್ತದೆ ಎಂದರು. ಪ್ರಜಾಪ್ರಭುತ್ವದಲ್ಲಿ ಮಹಿಳೆಯರ ಪಾತ್ರ ಬಲಗೊಳಿಸುವ ನಿಟ್ಟಿನಲ್ಲಿ ಚರ್ಚಿಸಲು ಇದೇ ೧೬ ರಿಂದ ಸಂಸತ್ತಿನ ವಿಶೇಷ ಅಧಿವೇಶನ ಕರೆಯಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ನಾರಿ ಶಕ್ತಿ ವಂದನ ಸಮ್ಮೇಳನದ ನೇರಪ್ರಸಾರವನ್ನು ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿಂದು ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವೀಕ್ಷಿಸಿದರು. ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ ಸೇರಿದಂತೆ ಪಕ್ಷದ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**<><*<><>*><>**

ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್.ಪುರದ ಹೊರ ವಲ್ಲಯದಲ್ಲಿ ಭದ್ರಾ ಹಿನ್ನೀರಿನಲ್ಲಿ ನಿರ್ಮಿಸಲಾಗಿರುವ ಸೇತುವೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಲೋಕಾರ್ಪಣೆ ಮಾಡಿದರು ಎನ್.ಆರ್ ಪುರ- ಹಂದೂರು ಗ್ರಾಮ ಸೇರಿ ಹಲವು ಹಳ್ಳಿಗಳನ್ನು ಸಂಪರ್ಕಿಸುವ ಈ ಸೇತುವೆಗಾಗಿ ರಾಜ್ಯ ಸರ್ಕಾರ ೩೮ ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದ್ದು ಪ್ರಸ್ತುತ ಕಾಮಗಾರಿಗೆ ೩೫ ಕೋಟಿ ರೂಪಾಯಿ ವೆಚ್ಚವಾಗಿದೆ. ಸೇತುವೆ ಉದ್ಘಾಟನೆ ಬಳಿಕ ಎನ್.ಎರ್ ಪುರ ಪಟ್ಟಣದ ಟಿ.ಬಿ ವೃತ್ತದಲ್ಲಿ ನಡೆದ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಸರ್ಕಾರ ಗ್ಯಾರಂಟಿ ಯೋಜನೆಗಳ ಜೊತೆಗೆ ರಾಜ್ಯದ ಅಭಿವೃದ್ಧಿಯನ್ನು ಮಾಡುತ್ತಿದೆ. ಇದರಿಂದ ಜನರ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯಾಗಿದೆ. ಈಗಾಗಲೆ ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ೧ ಲಕ್ಷದ ೩೧ ಸಾವಿರ ಕೋಟಿ ರೂಪಾಯಿ ಖರ್ಚು ಮಾಡಿದೆ ಎಂದು ಹೇಳಿದರು.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ ( 26 ಸೆಕೆಂಡ್ಸ್)**

ಕಾರ್ಯಕ್ರಮದಲ್ಲಿ ಸಚಿವ ಕೆ.ಜೆ ಜಾರ್ಜ್, ಶಾಸಕರಾದ ಟಿ.ಡಿ ರಾಜೇಗೌಡ, ಶ್ರೀನಿವಾಸ್, ಆನಂದ್ ಸೇರಿ ಹಲವರು ಉಪಸ್ಥಿತರಿದ್ದರು.

<><*<><>*><>

ಮಹಿಳಾ ಮೀಸಲಾತಿ ಒಂದು ರಾಜಕೀಯ ತಂತ್ರ ಎಂದು ಹೇಳಿಕೆ ನೀಡುವ ಮೂಲಕ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ದೇಶದ ನಾರಿಶಕ್ತಿಗೆ ಅಪಮಾನ ಮಾಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಪಾದಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳಾ ಮೀಸಲಾತಿಯು ಪ್ರಧಾನಿಯವರು ತೆಗೆದುಕೊಂಡ ಐತಿಹಾಸಿಕ ನಿರ್ಣಯ ಎಂದು ಶ್ಲಾಘಿಸಿದರು. ಇತ್ತೀಚೆಗೆ ನಡೆದಿರುವ ಉಪಚುನಾವಣೆಯಲ್ಲಿ ಬಾಗಲಕೋಟೆ, ದಾವಣಗೆರೆ ದಕ್ಷಿಣ ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಗೆಲ್ಲುವ ಸಂಪೂರ್ಣ ವಿಶ್ವಾಸವಿದೆ ಎಂದು ಬಿ.ವೈ. ವಿಜಯೇಂದ್ರ ಹೇಳಿದರು.

<><*<><>*><>

ಪಕ್ಷದ ಎಲ್ಲರೂ ಶಿಸ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಕೆಲವು ಶಾಸಕರು ಸಚಿವ ಸ್ಥಾನ ಪಡೆಯಲು ದೆಹಲಿಗೆ ತೆರಳಿದ್ದಾರೆ ಎನ್ನುವ ಸುದ್ದಿಗಾರರ ಪ್ರಶ್ನೆಗೆ ಬೆಂಗಳೂರಿಲ್ಲಿಂದು ಉತ್ತಿರಿಸದ ಅವರು, ಶಾಸಕರು ಅನಾವಶ್ಯಕ ಹೇಳಿಕೆ ನೀಡಬಾರದು. ಅಂತಹ ಹೇಳಿಕೆ ನೀಡಿದರೆ, ಶಿಸ್ತಿನ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

<><*<><>*><>

ಮಾನಸಿಕ ಆರೋಗ್ಯ ಉಪಚಾರಗಳಲ್ಲಿ ಡಿಜಿಟಲ್ ಮಧ್ಯಸ್ಥಿಕೆ ಕುರಿತ ರಾಷ್ಟ್ರೀಯ ಸಲಹಾ ಸಮಿತಿ ಸಭೆ, ಇದೇ ೧೫ ರಿಂದ ೧೭ರವರೆಗೆ ಬೆಂಗಳೂರಿನಲ್ಲಿರುವ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ-ನಿಮ್ಹಾನ್ಸ್ ಆವರಣದಲ್ಲಿ ನಡೆಯಲಿದೆ. ನಿಮ್ಹಾನ್ಸ್ ಹಾಗೂ ಐಸಿಎಂಆರ್ ಆಯೋಜಿಸಿರುವ ಈ ಸಭೆಯಲ್ಲಿ, ಡಿಜಿಟಲ್ ತಂತ್ರಜ್ಞಾನಗಳ ಸುರಕ್ಷಿತ ಬಳಕೆಗಾಗಿ ನಿರ್ಬಂಧಕ ಶಿಫಾರಸು ಕುರಿತು ಚರ್ಚೆ ನಡೆಯಲಿದೆ. ವಿದ್ಯಾರ್ಥಿ ಸಮೂಹಗಳಲ್ಲಿ ಅತಿಯಾದ ಡಿಜಿಟಲ್ ಬಳಕೆ, ಸೈಬರ್ ಸುರಕ್ಷತೆ, ವಿದ್ಯಾರ್ಥಿಗಳ ಮೇಲೆ ಸಾಮಾಜಿಕ ಮಾಧ್ಯಮಗಳ ಪರಿಣಾಮ. ಮಕ್ಕಳಲ್ಲಿ ಜವಾಬ್ದಾರಿಯುತ ಡಿಜಿಟಲ್ ಬಳಕೆ-ಕರ್ನಾಟಕದ ನೀತಿ ಮೊದಲಾದ ವಿಚಾರಗಳ ಬಗ್ಗೆ ತಜ್ಞರು ಅಭಿಪ್ರಾಯ ಮಂಡಿಸಲಿದ್ದಾರೆ.

<><*<><>*><>

ಬೆಂಗಳೂರಿನಲ್ಲಿರುವ ಕೇಂದ್ರ ಸರ್ಕಾರಿ ಸ್ವಾಮ್ಯದ ಭಾರತ್ ಅರ್ತ್ ಮೂವರ್ಸ್ ಲಿಮಿಟೆಡ್- ಬಿಇಎಂಎಲ್ ಸಂಸ್ಥೆ, ದೇಶೀಯವಾಗಿ ನಿರ್ಮಿಸಿರುವ ಇಂಧನ ದಕ್ಷತೆಯ ೩೫ ಟನ್ ಸಾಮರ್ಥ್ಯದ ಎಲೆಕ್ಟ್ರಿಕ್ ಡಂಪ್ ಟ್ರಕ್ ಅನ್ನು ಇಂದು ಬಿಡುಗಡೆ ಮಾಡಲಾಯಿತು. ಬಿಇಎಂಎಲ್ ಸಂಸ್ಥೆ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಶಾಂತನು ರಾಯ್, ಟ್ರಕ್ ಸಂಚಾರಕ್ಕೆ ಹಸಿರುನಿಶಾನೆ ತೋರಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹೊಸ ಟ್ರಕ್, ಸುಸ್ಥಿರ ಹಾಗೂ ಮುಂದುವರಿದ ಇಂಜಿನಿಯರಿಂಗ್ ಪಾರಮ್ಯತೆಗೆ ಸಾಕ್ಷಿಯಾಗಿದೆ. ಇದು ನಾವಿನ್ಯತೆ, ದೇಶೀಕರಣ ಮತ್ತು ಪರಿಸರ ಸಂರಕ್ಷಣೆಯತ್ತ ಬಿಇಎಂಎಲ್‌ಗೆ ಇರುವ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದರು. ಶುದ್ಧ ತಂತ್ರಜ್ಞಾನಗಳತ್ತ ಜಾಗತಿಕವಾಗಿ ನಡೆಯುತ್ತಿರುವ ಪರಿವರ್ತನೆಗೆ ಅನುಗುಣವಾಗಿ, ಶೂನ್ಯ ಹೊರಸೂಸುವಿಕೆ ಹೊಂದಿದ ಉನ್ನತ ಕಾರ್ಯಕ್ಷಮತೆಯ ಉಪಕರಣಗಳನ್ನು ನೀಡುವ ಮೂಲಕ ಬಿಇಎಂಎಲ್ ಮುಂಚೂಣಿಯಲ್ಲಿದೆ ಎಂದು ಅವರು ಹೇಳಿದರು ಈ ಎಲೆಕ್ಟ್ರಿಕ್ ಡಂಪ್ ಟ್ರಕ್, ಸುಸ್ಥಿರ ಗಣಿಗಾರಿಕೆ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಪ್ರಮುಖ ಕೊಡುಗೆ ನೀಡಲಿದೆ. ಸ್ಥಳೀಯವಾಗಿ ವಿನ್ಯಾಸಗೊಳಿಸಲಾದ ಈ ಟ್ರಕ್ ೩೫ ಟನ್ ಪೇಲೋಡ್ ಸಾಮರ್ಥ್ಯ ಹೊಂದಿದ್ದು, ಒಟ್ಟು ೭೦ ಟನ್ ತೂಕವನ್ನು ಸಾಗಿಸುವ ಸಾಮರ್ಥ್ಯ ಹೊಂದಿದೆ, ಪರ್ಮನೆಂಟ್ ಮ್ಯಾಗ್ನೆಟ್ ಸಿಂಕ್ರೋನಸ್ ಮೋಟಾರ್‌ನಿಂದ

ಚಾಲಿತವಾಗಿರುವ ಈ ವಾಹನ ಶೇಕಡ ೮೫ ರಿಂದ ೯೦ರಷ್ಟು ಇಂಧನ ದಕ್ಷತೆ ನೀಡುತ್ತದೆ. ಇದು ಸಾಂಪ್ರದಾಯಿಕ ಡೀಸೆಲ್ ವಾಹನಗಳಿಗಿಂತ ದಕ್ಷತೆ ಹೆಚ್ಚಾಗಿದೆ ಎಂದು ಅವರು ತಿಳಿಸಿದರು.

**<><*<><>*><>**

ನಾಳೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ. ಈ ಸಂದರ್ಭದಲ್ಲಿ ರಾಜ್ಯಾದ್ಯಂತ ಅನೇಕ ವಿಧಾಯಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ರಾಜ್ಯ ಸರ್ಕಾರ ೨೦೨೬ನೇ ಸಾಲಿನ ಡಾ.ಬಿ.ಆರ್.ಅಂಬೇಡ್ಕರ್ ಪ್ರಶಸ್ತಿಗಳನ್ನು ಪ್ರಕಟಿಸಿದೆ. ಮಂಗಳೂರು ವಿಜಯ, ಸಿ.ಎಂ.ಮುನಿಯಪ್ಪ, ಎಚ್.ಎನ್.ಅಣ್ಣಯ್ಯ, ಡಾ.ಹನುಮಂತರಾಯ ದೊಡ್ಮನಿ ಮತ್ತು ಶೋಭಾ ಗಸ್ತಿ, ಈ ಪ್ರಶಸ್ತಿಗೆ ಭಾಜನರಾಗಿದಾರೆ. ಪ್ರಶಸ್ತಿ ಐದು ಲಕ್ಷ ನಗದು ಮತ್ತು ೨೦ ಗ್ರಾಂ ಚಿನ್ನದ ಪದಕ ಒಳಗೊಂಡಿದೆ. ನಾಳೆ ನಡೆಯಲಿರುವ ೧೩೫ನೇ ಅಂಬೇಡ್ಕರ್ ಜಯಂತಿಯಂದು ಈ ಪ್ರಶಸ್ತಿ ಪ್ರದಾನ ನಡೆಯಲಿದೆ.

**<><*<><>*><>**

ಮಾನವ ಮತ್ತು ವನ್ಯಜೀವಿ ಸಂಘರ್ಷ ತಡೆಗೆ ವನ್ಯಜೀವಿಗಳಿಗೆ ಸಂತಾನ ಶಕ್ತಿ ಹರಣ ಚಿಕಿತ್ಸೆ ಮಾಡುವ ಚಿಂತನೆಗೆ ಮುಂದಾಗಬಾರದು ಎಂದು ಒತ್ತಾಯಿಸಿ, ಚಾಮರಾಜನಗರ ತಾಲೂಕಿನ ಮರಿಯಾಲ ಮೇಲ್ಸೇತುವೆ ಬಳಿ ರೈತರು ಇಂದು ಪ್ರತಿಭಟನೆ ನಡೆಸಿದರು. ಸರ್ಕಾರವು ಅವೈಜ್ಞಾನಿಕ ಚಿಂತನೆ ನಡೆಸಿದ್ದು ಈ ಯೋಜನೆ ಎಂದಿಗೂ ಜಾರಿಯಾಗಬಾರದು ಎಂದು ಕಬ್ಬು ಬೆಳಗಾರರು ಒತ್ತಾಯಿಸಿದರು. ರೈತ ಮುಖಂಡ ಭಾಗ್ಯರಾಜ್ ಮಾತನಾಡಿ, ವನ್ಯಜೀವಿಗಳಿಗೆ ಸಂತಾನ ಶಕ್ತಿ ಹರಣ ಚಿಕಿತ್ಸೆ ಎಂಬುದು ಅಮಾನವೀಯ ಎಂದರು.

**<><*<><>*><>**

ಬೇಸಿಗೆಯ ರಜಾ ದಿನಗಳಲ್ಲಿ ಪ್ರಯಾಣಿಕರಿಗೆ ಅನುಕೂಲವಾಗುವಂತೆ ರೈಲ್ವೆ ಇಲಾಖೆ, ಎರಡು ಹೆಚ್ಚುವರಿ ರೈಲು ಸಂಚಾರ ಪ್ರಕಟಿಸಿದೆ. ಹುಬ್ಬಳ್ಳಿ ಮತ್ತು ಪಶ್ಚಿಮ ಬಂಗಾಳದ ಅಲಿಪುರ್ ದ್ವಾರ್ ನಿಲ್ದಾಣಗಳ ನಡುವೆ ಹಾಗೂ ಬೆಂಗಳೂರಿನ ಎಸ್ಎಂವಿಟಿ ಮತ್ತು ಯಲಹಂಕ ನಿಲ್ದಾಣಗಳ ಮೂಲಕ ಒಂದು ಟ್ರಿಪ್ ವಿಶೇಷ ಎಕ್ಸ್ ಪ್ರೆಸ್ ರೈಲನ್ನು ಓಡಿಸಲಾಗುವುದು ಎಂದು ರೈಲ್ವೆ ಇಲಾಖೆ ಪ್ರಕಟಣೆ ತಿಳಿಸಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು ನಾಡಿದ್ದು, ಮಂಡ್ಯ ಜಿಲ್ಲೆಯ ನಾಗಮಂಗಲದ ಆದಿಚುಂಚನಗಿರಿಗೆ ಆಗಮಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು, ಭೈರವೈಕ್ಯ ಶ್ರೀಬಾಲಗಂಗಾಧರನಾಥ ಶ್ರೀಗಳ ಮಂದಿರ ಲೋಕಾರ್ಪಣೆ ಹಾಗೂ ವಿಗ್ರಹ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಈಗಾಗಲೇ ವರದಿಯಾಗಿರುವಂತೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ನಿನ್ನೆ ಆದಿಚುಂಚನಗಿರಿಗೆ ಬೇಟಿ ನೀಡಿ, ಸಿದ್ಧತೆ ಪರಿಶೀಲಿಸಿದ್ದಾರೆ.

**<><*<><>*><>**

ರಾಜ್ಯದ್ಯಾಂತ ಒಣಹವೆ ಮುಂದುವರಿಯಲಿದೆ. ಕರಾವಳಿ ಪ್ರದೇಶಗಳಲ್ಲಿ ತೀವ್ರಬೇಗೆ ಮತ್ತು ತೇವಾಂಶಬರಿತ ಹವಾಮಾನ ಮುಂದುವರಿಯಲಿದೆ. ಈ ೧೮ರವರೆಗೆ ತಾಪಮಾನ ಕ್ರಮೇಣ ೬ ರಿಂದ ೮ ಡಿಗ್ರಿವರೆಗೆ ಹೆಚ್ಚಾಗಲಿದೆ. ಕರಾವಳಿ ಪ್ರದೇಶಗಳಲ್ಲಿ ಗುಡುಗು, ಸಿಡಿಲು ಸಹಿತ ಬಲವಾದ ಮೇಲ್ಮೈ ಗಾಳಿ ಬೀಸಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**